**ಕರ್ನಾಟಕಸರ್ಕಾರ**

ಸಂಖ್ಯೆ: ಕಂಇ 104 ಟಿಎನ್ಆರ್ 2024 (ಭಾ-1)

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 03-04-2024.

## ಸುತ್ತೋಲೆ

**ವಿಷಯ:** ಅತೀ ಹೆಚ್ಚು ತಾಪಮಾನ (heat wave) ಸಮಯದಲ್ಲಿ ಪ್ರತಿಕೂಲ ಪರಿಣಾಮವನ್ನು ಕಡಿಮೆ ಮಾಡಲು ಸಲಹೆ / ಸೂಚನೆಗಳು.

**ಉಲ್ಲೇಖ:** ಭಾರತ ಹವಾಮಾನ ಇಲಾಖೆ (IMD) ಯು ಬೇಸಿಗೆ ಋತುವಿನ ಅತೀ ಹೆಚ್ಚು ತಾಪಮಾನ (heat wave) ಕುರಿತು ಬಿಡುಗಡೆ ಮಾಡಿರುವ ಮುನ್ಸೂಚನೆ.

*****

ಭಾರತ ಹವಾಮಾನ ಇಲಾಖೆ (IMD) ಯು ಪ್ರಸಕ್ತ ವರ್ಷದಲ್ಲಿ ಅತೀ ಹೆಚ್ಚು ತಾಪಮಾನ (heat wave) ಕುರಿತು ಹೊರಡಿಸಿದ ಮುನ್ಸೂಚನೆ ಅನ್ವಯ ದೇಶದ ಹೆಚ್ಚಿನ ಭಾಗಗಳಲ್ಲಿ ಸಾಮಾನ್ಯ ಗರಿಷ್ಠ ತಾಪಮಾನವನ್ನು ಸೂಚಿಸುತ್ತದೆ. ಪ್ರಸ್ತುತ, ರಾಜ್ಯದ ಉತ್ತರ ಒಳನಾಡು, ದಕ್ಷಿಣ ಒಳನಾಡು ಮತ್ತು ಕರಾವಳಿ ಪ್ರದೇಶಗಳ ಕೆಲವು ಭಾಗಗಳಲ್ಲಿ ಸಾಮಾನ್ಯ ತಾಪಮಾನಕ್ಕಿಂತ 2-3 ಡಿಗ್ರಿಗಳಷ್ಟು ಅಧಿಕ ತಾಪಮಾನ ದಾಖಲಾಗುತ್ತಿದ್ದು, ಇದು ಮಾನವ ಹಾಗೂ ಪ್ರಾಣಿಗಳ ಆರೋಗ್ಯಕ್ಕೆ ಹಾನಿಕಾರಕವಾಗಿದೆ. ಭಾರತೀಯ ಹವಾಮಾನ ಇಲಾಖೆ (IMD)ಯು 2024 ರ ಏಪ್ರಿಲ್ 01 ರಂದು ಬಿಡುಗಡೆ ಮಾಡಲಾದ ಹವಾಮಾನ ಸಂಭವನೀಯತೆಯ ಮುನ್ನೋಟವನ್ನು ಆಧರಿಸಿ, ಕರ್ನಾಟಕ ರಾಜ್ಯದಲ್ಲಿ ಏಪ್ರಿಲ್ ಮಾಹೆಯಿಂದ ಮೇ- 2024 ರ ಅವಧಿಯಲ್ಲಿ ಮುಂಬರುವ ಬಿಸಿ ವಾತಾವರಣವು ಸಾಮಾನ್ಯ ತಾಪಮಾನಕ್ಕಿಂತ ಹೆಚ್ಚಾಗಿ ಇರುತ್ತದೆ ಎಂದು ಸೂಚಿಸಿರುತ್ತದೆ. ತಾಪಮಾನದ ಮುನ್ಸೂಚನೆಯ ಹೆಚ್ಚಳವು ರಾಜ್ಯದಾದ್ಯಂತ ಸಾಮಾನ್ಯ ಶಾಖದ ಅಲೆಗಳ ದಿನಗಳನ್ನು 2-14 ದಿನಗಳು ಮೀರುವ ಸಾಧ್ಯತೆಯಿದೆ. ಅಲ್ಲದೇ, ಈಗಾಗಲೇ ರಾಜ್ಯದಲ್ಲಿ 223 ತಾಲ್ಲೂಕುಗಳನ್ನು ಬರಪೀಡಿತ ತಾಲ್ಲೂಕುಗಳೆಂದು ಘೋಷಣೆ ಮಾಡಿರುವುದರಿಂದ, ಅತೀ ಹೆಚ್ಚು ತಾಪಮಾನ (heat wave) ಪ್ರತಿಕೂಲ ಪರಿಣಾಮವನ್ನು ತಡೆಗಟ್ಟಲು ಮತ್ತು ತಗ್ಗಿಸಲು ಸಲಹೆಗಳನ್ನು ನೀಡುವುದು ಅವಶ್ಯವಿರುತ್ತದೆಂದು ತೀರ್ಮಾನಿಸಿದೆ. ಅದರಂತೆ, ಈ ಕೆಳಕಂಡ ಸಲಹೆ / ಸೂಚನೆಗಳನ್ನು ನೀಡಿದೆ:

**I ಅತೀ ಹೆಚ್ಚು ತಾಪಮಾನದಿಂದ (heat wave) ಉಂಟಾಗುವ ಅನಾರೋಗ್ಯವನ್ನು ತಡೆಗಟ್ಟಲು ಸಾಮಾನ್ಯ ಸೂಚನೆಗಳು:**

i. ಸಾಧ್ಯವಾದಷ್ಟು ಮಟ್ಟಿಗೆ ವಿಶೇಷವಾಗಿ ಗರಿಷ್ಠ ತಾಪಮಾನದ ಅವಧಿಯಲ್ಲಿ ಬಿಸಿಲಿನಲ್ಲಿ ಹೋಗುವುದನ್ನು ತಪ್ಪಿಸುವುದು (ಮಧ್ಯಾಹ್ನ 12.00 ರಿಂದ 3.00 ರವರೆಗೆ).

ii. ಕಾಲಕಾಲಕ್ಕೆ ಸಾಕಷ್ಟು ನೀರು ಕುಡಿಯುವುದು.

iii. ಹಗುರವಾದ, ತಿಳಿ ಬಣ್ಣದ ಸಡಿಲವಾದ ಮತ್ತು ಹತ್ತಿಬಟ್ಟೆಗಳನ್ನು ಧರಿಸುವುದು.

iv. ಬಿಸಿಲಿನಲ್ಲಿ ಹೋಗುವಾಗ ರಕ್ಷಣೆಗಾಗಿ ಕನ್ನಡಕಗಳು, ಛತ್ರಿ / ಟೋಪಿ, ಬೂಟುಗಳು ಅಥವಾ ಚಪ್ಪಲಿಗಳನ್ನು ಬಳಸುವುದು.

v. ಹೊರಗಿನ ಉಷ್ಣತೆಯು ಅಧಿಕವಾಗಿರುವಾಗ ಶ್ರಮದಾಯಕ ಚಟುವಟಿಕೆಗಳನ್ನು ತಪ್ಪಿಸುವುದು (ಮಧ್ಯಾಹ್ನ 12 ರಿಂದ 3 ಗಂಟೆಯವರೆಗೆ ಹೊರಗೆ ಕೆಲಸ ಮಾಡುವುದನ್ನು).

vi. ಪ್ರಯಾಣ ಮಾಡುವಾಗ, ನೀರನ್ನು ಜೊತೆಯಲ್ಲಿ ಒಯ್ಯುವುದು.

vii. ದೇಹವನ್ನು ನಿರ್ಜಲೀಕರಣಗೊಳಿಸುವ ಆಲ್ಕೋಹಾಲ್, ಚಹಾ, ಕಾಫಿ ಮತ್ತು ಕಾರ್ಬೋನೇಟೆಡ್ ತಂಪು ಪಾನೀಯಗಳನ್ನು ತಪ್ಪಿಸುವುದು.

viii. ಸಾಧ್ಯವಾದಷ್ಟು ಬಿಸಿ ಆಹಾರವನ್ನು ಸೇವಿಸುವುದು.

ix. ನಿಲ್ಲಿಸಿದ ವಾಹನಗಳಲ್ಲಿ ಮಕ್ಕಳನ್ನು ಅಥವಾ ಸಾಕುಪ್ರಾಣಿಗಳನ್ನು ಬಿಡದಿರುವುದು.

x. ಮೂರ್ಛೆ ಅಥವಾ ಅನಾರೋಗ್ಯ ಅನಿಸಿದರೆ ತಕ್ಷಣ ವೈದ್ಯರನ್ನು ಭೇಟಿಮಾಡುವುದು.

xi. ನಿಂಬೆ ನೀರು, ಮಜ್ಜಿಗೆ ಮುಂತಾದ ಮನೆಯಲ್ಲಿ ತಯಾರಿಸಿದ ಪಾನೀಯಗಳು ಮತ್ತು ORS ಅನ್ನು ಬಳಸುವುದು.

xii. ಸಾಕುಪ್ರಾಣಿಗಳನ್ನು ನೆರಳಿನಲ್ಲಿ ಇರಿಸಿ ಮತ್ತು ಅವುಗಳಿಗೆ ಕುಡಿಯಲು ಸಾಕಷ್ಟು ನೀರು ಒದಗಿಸುವುದು.

xiii. ಮನೆಯನ್ನು ತಂಪಾಗಿರಿಸಲು ಪರದೆಗಳು, ಶಟರ್‌ಗಳು ಅಥವಾ ಸನ್‌ಶೇಡ್‌ಗಳನ್ನು ಬಳಸುವುದು. ಹಾಗೂ ಆಗ್ಗಿಂದಾಗೆ ತಣ್ಣೀರು ಸ್ನಾನ ಮಾಡುವುದು.

xiv. ಹೊರಗೆ ಹೋಗುವಾಗ ನೀರಿನ ಬಾಟಲಿ, ಛತ್ರಿ / ಟೋಪಿ ಅಥವಾ ಕ್ಯಾಪ್ / ಹೆಡ್‌ಕವರ್, ಹ್ಯಾಂಡ್‌ಟವೆಲ್, ಹ್ಯಾಂಡ್‌ಫ್ಯಾನ್, ಎಲೆಕ್ಟ್ರೋಲೈಟ್ / ಗ್ಲೂಕೋಸ್ / ORS ಅನ್ನು ಒಳಗೊಂಡಿರುವ ಅತೀ ಹೆಚ್ಚು ತಾಪಮಾನವನ್ನು (heat wave) ತಡೆಗಟ್ಟುವ ಕಿಟ್‌ಅನ್ನು ಒಯ್ಯಲು ನಾಗರಿಕರನ್ನು ಪ್ರೋತ್ಸಾಹಿಸುವುದು.

**II ಅತೀ ಹೆಚ್ಚು ತಾಪಮಾನದಿಂದ (heat wave) ಆರೋಗ್ಯದ ಮೇಲಾಗುವ ಪರಿಣಾಮಗಳು ಹಾಗೂ ಗುರುತಿಸುವಿಕೆ:**

ಅತೀ ಹೆಚ್ಚು ತಾಪಮಾನದಿಂದ (heat wave) ಸಾಮಾನ್ಯವಾಗಿ ನಿರ್ಜಲೀಕರಣ, ಶಾಖ ಸೆಳೆತ, ಶಾಖದ ಬಳಲಿಕೆ ಮತ್ತು / ಅಥವಾ ಶಾಖದ ಅಘಾತದಂತಹ (sun stroke) ಆರೋಗ್ಯದ ದುಷ್ಪರಿಣಾಮಗಳು ಉಂಟಾಗುವ ಸಾಧ್ಯತೆ ಇದ್ದು, ಅವುಗಳ ರೋಗ ಲಕ್ಷಣಗಳು ಈ ಕೆಳಕಂಡಂತಿವೆ:

i. **ಶಾಖ ಸೆಳೆತಗಳು (Heat cramps):** ಎಡೆಮಾ (ಊತ) ಮತ್ತು ಮೂರ್ಛೆ ಸಾಮಾನ್ಯವಾಗಿ 39 ° C ಅಂದರೆ 102 °F ಗಿಂತ ಕಡಿಮೆ ಜ್ವರದಿಂದ ಕೂಡಿರುತ್ತದೆ.

ii. **ಶಾಖದ ಬಳಲಿಕೆ:** ಆಯಾಸ, ದೌರ್ಬಲ್ಯ, ತಲೆ ತಿರುಗುವಿಕೆ, ತಲೆ ನೋವು, ವಾಕರಿಕೆ, ವಾಂತಿ, ಸ್ನಾಯು ಸೆಳೆತ ಮತ್ತು ಬೆವರುವುದು.

iii. **ಶಾಖಾಘಾತ (Sun Stroke):** ದೇಹದ ಉಷ್ಣತೆಯು 40 ° C ಅಂದರೆ 104 ° F ಅಥವಾ ಅದಕ್ಕಿಂತ ಹೆಚ್ಚಾಗುವುದು ಹಾಗೂ ಉಸಿರಾಟದಲ್ಲಿ ವ್ಯತ್ಯಯ ಮತ್ತು ಪ್ರಜ್ಞೆ ತಪ್ಪುವುದು.

**III ಅತೀ ಹೆಚ್ಚು ತಾಪಮಾನ (heat wave) ಕ್ಕೆ ಸಂಬಂಧಿತ ಕಾಯಿಲೆಗೆ ಪ್ರಥಮ ಚಿಕಿತ್ಸೆ:**

i. ಅತೀ ಹೆಚ್ಚು ತಾಪಮಾನದಿಂದ (heat wave) ತುತ್ತಾದ ವ್ಯಕ್ತಿಯನ್ನು ನೆರಳಿನ ಅಡಿಯಲ್ಲಿ ತಂಪಾದ ಸ್ಥಳಕ್ಕೆ ಸ್ಥಳಾಂತರಿಸುವುದು. ಒದ್ದೆಯಾದ ಬಟ್ಟೆಯಿಂದ ಮೈ ಒರೆಸುವುದು / ತಂಪಾದ ಒದ್ದೆ ಬಟ್ಟೆಯನ್ನು ಹಾಕುವುದು ಹಾಗೂ ದೇಹದ ಉಷ್ಣತೆಯನ್ನು ತಗ್ಗಿಸಲು ತಲೆಯ ಮೇಲೆ ನೀರನ್ನು ಹಾಕುವುದು.

ii. ನೀರು ಅಥವಾ ಪುನರ್ಜಲೀಕರಣ ಪಾನೀಯಗಳಾದ ಒಆರ್‌ಎಸ್, ನಿಂಬೆ ಪಾನಕ ನೀಡುವುದು (ವ್ಯಕ್ತಿ ಇನ್ನೂ ಪ್ರಜ್ಞೆ ಹೊಂದಿದ್ದರೆ)

iii. ವ್ಯಕ್ತಿಗೆ ತಂಪಾದ ಗಾಳಿಯ ವ್ಯವಸ್ಥೆ ಮಾಡುವುದು. ಉತ್ತಮ ಗಾಳಿಗಾಗಿ ಬಟ್ಟೆಗಳನ್ನು ಸಡಿಲಗೊಳಿಸುವುದು.

iv. ರೋಗ ಲಕ್ಷಣಗಳು ಉಲ್ಬಣಗೊಂಡರೆ ಅಥವಾ ದೀರ್ಘಕಾಲದವರೆಗೆ ಇದ್ದರೆ ಅಥವಾ ವ್ಯಕ್ತಿಯು ಪ್ರಜ್ಞಾಹೀನ ಸ್ಥಿತಿಯಲ್ಲಿದ್ದರೆ ವೈದ್ಯರನ್ನು ಕೂಡಲೇ ಸಂಪರ್ಕಿಸುವುದು.

v. ಮದ್ಯ ಪಾನ, ಕಾಫಿ, ಶೇಖರಿಸಿದ ಪಾನೀಯವನ್ನು ನೀಡಬಾರದು.

**IV ಅತೀ ಹೆಚ್ಚು ತಾಪಮಾನಕ್ಕೆ (heat wave) ಸಂಬಂಧಿತ ಅನಾರೋಗ್ಯವನ್ನು ತಡೆಗಟ್ಟಲು ಜಿಲ್ಲಾಧಿಕಾರಿಗಳು ಜಿಲ್ಲಾ ಮಟ್ಟದಲ್ಲಿ ತೆಗೆದುಕೊಳ್ಳಬೇಕಾದ ನಿರ್ದಿಷ್ಟ ಕ್ರಮಗಳು:**

i. ಅತೀ ಹೆಚ್ಚು ತಾಪಮಾನಕ್ಕೆ (heat wave) ಸಂಬಂಧಿಸಿದಂತೆ IMD ಮತ್ತು KSNDMC ಯಿಂದ ನೀಡಿದ ಮುನ್ಸೂಚನೆ / ಎಚ್ಚರಿಕೆಗಳನ್ನು ಕಟ್ಟ ಕಡೆಯ ವ್ಯಕ್ತಿಗೆ ತಲುಪಿಸುವುದು.

ii. ಅತೀ ಹೆಚ್ಚು ತಾಪಮಾನದ (heat wave) ಪ್ರತಿಕೂಲ ಪರಿಣಾಮಗಳ ಬಗ್ಗೆ ಅರಿವು ಮೂಡಿಸಲು ಮತ್ತು ಅತೀ ಹೆಚ್ಚು ತಾಪಮಾನದ (heat wave) ಸಮಯದಲ್ಲಿ ಮಾಡಬೇಕಾದ ಮತ್ತು ಮಾಡಬಾರದ ವಿಷಯಗಳ ಬಗ್ಗೆ ಅರಿವು ಮೂಡಿಸಲು ಆರೋಗ್ಯ ಇಲಾಖೆ ತಯಾರಿಸಿರುವ IEC ಸಕ್ರಿಯಗೊಳಿಸುವುದು.

iii. ನಗರ, ಪಟ್ಟಣ, ಕೊಳಚೆ ಪ್ರದೇಶಗಳು, ಅತೀ ಹೆಚ್ಚು ತಾಪಮಾನಕ್ಕೆ (heat wave) ತುತ್ತಾಗುವಂತಹ ಹಳ್ಳಿಗಳನ್ನು ಗುರುತಿಸಿ ಮತ್ತು ಕುಡಿಯುವ ನೀರಿನ ಸೌಲಭ್ಯಗಳ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವುದು.

iv. ಮಾರುಕಟ್ಟೆಗಳು, ಬಸ ನಿಲ್ದಾಣಗಳು / ಬಸ್ ಟರ್ಮಿನಲ್‌ಗಳು ಮತ್ತು ಜನರು ಸೇರುವ ಇತರ ಆಯಕಟ್ಟಿನ ಸ್ಥಳಗಳಲ್ಲಿ ಕುಡಿಯುವ ನೀರಿನ ಸೌಲಭ್ಯ ಒದಗಿಸುವುದು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ನೆರಳಿನ ಸೌಲಭ್ಯ ಕಲ್ಪಿಸುವುದು.

v. ಪ್ರಾಣಿಗಳಲ್ಲಿ ಬಿಸಿಗಾಳಿಗೆ ಸಂಬಂಧಿತ ಕಾಯಿಲೆಯ ಚಿಕಿತ್ಸೆಗೆ ನಿಯಮಾನುಸಾರ ಸಂಬಂಧಿಸಿದ ಪಶು ವೈದ್ಯಕೀಯ ಔಷಧಗಳನ್ನು ಶೇಖರಣೆ ಮಾಡುವುದು.

vi. ವಾಹನ ಚಾಲಕರಿಗೆ ಅವಶ್ಯ ಕುಡಿಯುವ ನೀರನ್ನು ಒದಗಿಸುವುದು ಹಾಗೂ ರಾಜ್ಯದಲ್ಲಿ ಅತೀ ಹೆಚ್ಚು ತಾಪಮಾನದ (heat wave) ಪರಿಸ್ಥಿತಿಗಳ ಬಗ್ಗೆ ಪ್ರವಾಸಿಗರಿಗೆ ಸಲಹೆಗಳನ್ನು ಪ್ರಚಾರ ಮಾಡುವುದು.

vii. ಧಾರ್ಮಿಕ ಸ್ಥಳಗಳಲ್ಲಿ ಯಾತ್ರಾರ್ಥಿಗಳಿಗೆ ಸುರಕ್ಷಿತ ಕುಡಿಯುವ ನೀರಿನ ಲಭ್ಯತೆಯನ್ನು ಖಚಿತಪಡಿಸಿಕೊಳ್ಳುವುದು ಹಾಗೂ ತಾತ್ಕಾಲಿಕ ನೆರಳಿನ ಪ್ರದೇಶಗಳನ್ನು ನಿರ್ಮಿಸುವುದು.

viii. ಸಾಮೂಹಿಕ ಸಭೆಯ ಹೊರಾಂಗಣ ಸ್ಥಳಗಳಲ್ಲಿ ಜನರಿಗೆ ತಾತ್ಕಾಲಿಕ ನೆರಳಿನ ವ್ಯವಸ್ಥೆ ಇರುವುದನ್ನು ಖಚಿತಪಡಿಸಿಕೊಳ್ಳಬೇಕು, ಸಾಕಷ್ಟು ಕುಡಿಯುವ ನೀರಿನ ಸೌಲಭ್ಯಗಳನ್ನು ಒದಗಿಸಬೇಕು, ಆಸನಗಳ ನಡುವೆ ಸಾಕಷ್ಟು ಸ್ಥಳಾವಕಾಶ ಇರಬೇಕು, ಸಾಕಷ್ಟು ORS ಮತ್ತು ಇತರ ಔಷಧಿಗಳ ದಾಸ್ತಾನು ಮತ್ತು ವೈದ್ಯಕೀಯ ಸಿಬ್ಬಂದಿ ಇರಬೇಕು. ಅತೀ ಹೆಚ್ಚು ತಾಪಮಾನಕ್ಕೆ (heat wave) ತುತ್ತಾದ ವ್ಯಕ್ತಿಗೆ ಪ್ರತ್ಯೇಕ ವಿಶ್ರಾಂತಿ ಸ್ಥಳವನ್ನು ಖಚಿತಪಡಿಸಿಕೊಳ್ಳಬೇಕು. ಅನುಕೂಲಕರ ತಾಪಮಾನವನ್ನು ಖಚಿತಪಡಿಸಿಕೊಳ್ಳಲು ಮತ್ತು ಸ್ಥಳದಲ್ಲಿ ಸಾಕಷ್ಟು ಗಾಳಿ ಸಂಚಾರ ಇರುವುದನ್ನು ಖಚಿತಪಡಿಸಿಕೊಳ್ಳಲು ಸಾಕಷ್ಟು ಸಂಖ್ಯೆಯ ಫ್ಯಾನ್ / ಏರ್ಕೂಲರ್‌ಗಳು ಇರಬೇಕು. ಸಾಧ್ಯವಾದಷ್ಟು ಮಟ್ಟಿಗೆ ಸಭೆ / ಸಮಾರಂಭಗಳನ್ನು ತಂಪಾದ ವಾತಾವರಣವಿರುವ ಅವಧಿಯಲ್ಲಿ (ಬೆಳಗ್ಗೆ ಅಥವಾ ಸಂಜೆ) ನಿಗದಿಪಡಿಸುವುದು.

ix. ಜಿಲ್ಲಾಧಿಕಾರಿಗಳು / ಜಿಲ್ಲಾ ವಿಪತ್ತು ನಿರ್ವಹಣಾ ಅಧಿಕಾರಿಗಳು ತಮ್ಮ ಜಿಲ್ಲೆಗೆ ಸಂಬಂಧಿಸಿದ ಅತೀ ಹೆಚ್ಚು ತಾಪಮಾನ (heat wave) ಕ್ರಿಯಾ ಯೋಜನೆಯನ್ನು ಸಿದ್ಧಪಡಿಸಿ ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವುದು.

**V ಕುಡಿಯುವ ನೀರಿನ ಲಭ್ಯತೆ:**

i. ಪ್ರಾದೇಶಿಕ ಆಯುಕ್ತರು ಹಾಗು ಜಿಲ್ಲಾಧಿಕಾರಿಗಳು ಜಲಸಂಪನ್ಮೂಲ ಇಲಾಖೆಯ ಅಧಿಕಾರಿಗಳೊಂದಿಗೆ ಸಮಾಲೋಚಿಸಿ ಜಲಾಶಯಗಳಲ್ಲಿ ಇರುವ ನೀರಿನ ಸಂಗ್ರಹಣೆಯನ್ನು ಕುಡಿಯುವ ನೀರಿನ ಉದ್ದೇಶಕ್ಕಾಗಿ ಆದ್ಯತೆಯ ಮೇರೆಗೆ ಕಾಯ್ದಿರಿಸುವುದು.

ii. ಹಿಂದಿನ ವರ್ಷಗಳ ಮಾಹಿತಿಯ ಆಧಾರದ ಮೇಲೆ ಕುಡಿಯುವ ನೀರಿನ ಕೊರತೆ ಉಂಟಾಗುವ ಗ್ರಾಮಗಳನ್ನು ಈಗಾಗಲೆ ಗುರುತಿಸಲಾಗಿದ್ದು, ಈ ಗ್ರಾಮಗಳ ವಸ್ತುಸ್ಥಿತಿಯ ಮೇಲೆ ನಿಗಾವಹಿಸುವುದು.

iii. ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮತ್ತು ಖಾಸಗಿ ಬೋರ್‌ವೆಲ್ ಗುರುತಿಸಿ ಅವುಗಳ ಮೂಲಕ ಕುಡಿಯುವ ನೀರಿನ ಕೊರತೆಯನ್ನು ಅಗತ್ಯತೆಗೆ ಅನುಗುಣವಾಗಿ ನೀಗಿಸಲು ಈಗಾಗಲೇ ಕ್ರಮ ವಹಿಸಲಾಗಿರುತ್ತದೆ. ಪರ್ಯಾಯ ಕಾರ್ಯತಂತ್ರವನ್ನು (ಕಾಂಟಿಂಜೆನ್ಸಿ ಯೋಜನೆ) ಈಗಾಗಲೆ ರೂಪಿಸಲಾಗಿದ್ದು ಆಧ್ಯತೆ ಮೇಲೆ ಹಾಗೂ ಅಗತ್ಯತೆಗೆ ತಕ್ಕಂತೆ ಇದನ್ನು ಅನುಷ್ಠಾನ ಮಾಡುವುದು.

iv. ಕುಡಿಯುವ ನೀರಿನ ಉದ್ದೇಶಕ್ಕಾಗಿ ಗ್ರಾಮ ಅಥವಾ ಪಟ್ಟಣಕ್ಕೆ ಅಗತ್ಯವಿರುವಷ್ಟು ನೀರನ್ನು ನಿಯಮಾನುಸಾರ ಪೈಪ್ ಲೈನ್ ಮೂಲಕ ಪೂರೈಸುವುದು.

v. ಅಸ್ತಿತ್ವದಲ್ಲಿರುವ ನೀರು ಸರಬರಾಜು ಯೋಜನೆಗಳ ವಿದ್ಯುತ್ ಪಂಪ್‌ಗಳು, ಕೈ ಪಂಪುಗಳ ದುರಸ್ತಿ, ಕಡಿಮೆ ನೀರಿನ ಲಭ್ಯತೆ ಇರುವ ಬೋರ್‌ವೆಲ್‌ಗಳನ್ನು ಫ್ಲಶಿಂಗ್ ಮಾಡುವುದು ಮತ್ತು ಆಳಗೊಳಿಸುವುದು ಮತ್ತು ಆರ್‌ಓ ಪ್ಲಾಂಟ್‌ಗಳ ನಿರ್ವಹಣೆ ಇತ್ಯಾದಿಗಳನ್ನುಆದ್ಯತೆಯ ಮೇಲೆ ಈಗಾಗಲೆ ತೆಗೆದುಕೊಳ್ಳಲಾಗಿದ್ದು ಇದರ ಮೇಲೆ ನಿಗಾವಹಿಸುವುದು.

vi. ಜಿಲ್ಲಾ ವಿಪತ್ತು ನಿರ್ವಹಣ ಪ್ರಾಧಿಕಾರ ಮತ್ತು ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಮಿತಿಗಳ ಸಭೆಗಳನ್ನು ಪ್ರತಿವಾರ ನಡೆಸುತ್ತಿದ್ದು ಇದನ್ನು ಮುಂದುವರೆಸುವುದು.

....5

**VI ಅತೀ ಹೆಚ್ಚು ತಾಪಮಾನ (heat wave) ಸಮಯದಲ್ಲಿ ಬೆಂಕಿಯ ತಡೆಗಟ್ಟುವಿಕೆ:**

i. ಆಸ್ಪತ್ರೆಗಳು, ಕೈಗಾರಿಕೆಗಳು, ಜನಸಂದಣಿ ಸ್ಥಳಗಳು ಇತ್ಯಾದಿಗಳಲ್ಲಿ ಅಗ್ನಿ ಸುರಕ್ಷತೆಯ ವಿವಿಧ ಅಂಶಗಳ ಮೇಲೆ ಆಗಾಗ್ಗೆ ತಪಾಸಣೆ ಕೈಗೊಳ್ಳುವುದು. ಅಗ್ನಿ ಸುರಕ್ಷತೆಗೆ ತರಬೇತಿಗಳನ್ನು ಕೈಗೊಳ್ಳುವುದು.

ii. ಎಲ್ಲಾ ಸಾರ್ವಜನಿಕ ಸ್ಥಳಗಳಲ್ಲಿ ಅಗ್ನಿ ಸುರಕ್ಷತಾ ಆಡಿಟ್ ಕಡ್ಡಾಯವಾಗಿ ನಡೆಸುವುದು.

ಅತೀ ಹೆಚ್ಚು ತಾಪಮಾನ (heat wave) ತಡೆಗಟ್ಟುವ ಕುರಿತಂತೆ ಇಲಾಖಾವಾರು ಕರ್ತವ್ಯ / ಜವಾಬ್ದಾರಿಗಳನ್ನು ಅತೀ ಹೆಚ್ಚು ತಾಪಮಾನದ (heat wave) ಕ್ರಿಯಾ ಯೋಜನೆಗಳಲ್ಲಿ ನಿಗದಿಪಡಿಸಲಾಗಿರುತ್ತದೆ. ಮೇಲೆ ವಿವರಿಸಿರುವ ಸಲಹೆ ಸೂಚನೆಗಳೊಂದಿಗೆ ಕ್ರಿಯಾ ಯೋಜನೆಗಳಡಿಯಲ್ಲಿ ಇಲಾಖೆಗಳಿಗೆ ನಿಗದಿಪಡಿಸಿರುವಂತೆ ಜಿಲ್ಲಾಧಿಕಾರಿಗಳು ಕ್ರಮಗಳನ್ನು ಕೈಗೊಳ್ಳುವುದು.

**(ಎಸ್.ಆರ್. ಶಿವಶಂಕರ್)**
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ
(ವಿಪತ್ತು ನಿರ್ವಹಣೆ & ನೋಂದಣಿ
ಮತ್ತು ಮುದ್ರಾಂಕ)

**ಇವರಿಗೆ:**

1. ಮುಖ್ಯ ಆಯುಕ್ತರು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ, ಹಡ್ಸನ್ ಸರ್ಕಲ್, ಬೆಂಗಳೂರು - 560 002.
2. ಪೊಲೀಸ್ ಮಹಾನಿರ್ದೇಶಕರು, ಕರ್ನಾಟಕ ರಾಜ್ಯ ಅಗ್ನಿ ಶಾಮಕ ಮತ್ತು ತುರ್ತು ಸೇವೆಗಳ ಇಲಾಖೆ, ನಂ.1, ಅಣ್ಣಾಸ್ವಾಮಿ ಮೊದಲಿಯರ್ ರಸ್ತೆ,ಬೆಂಗಳೂರು-560 045.
3. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ.
4. ಪ್ರಾದೇಶಿಕ ಆಯುಕ್ತರು, ಬೆಂಗಳೂರು, ಮೈಸೂರು, ಕಲಬುರಗಿ ಮತ್ತು ಬೆಳಗಾವಿ ಜಿಲ್ಲೆ.
5. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಅಧ್ಯಕ್ಷರು, ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕರ್ನಾಟಕ.
6. ಎಲ್ಲಾಜಿಲ್ಲಾಪಂಚಾಯಿತಿಗಳಮುಖ್ಯಕಾರ್ಯನಿರ್ವಾಹಕಅಧಿಕಾರಿಗಳು.

**ಪ್ರತಿಯನ್ನು**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಎಲ್ಲಾ ಇಲಾಖೆಗಳ ಅಪರ ಮುಖ್ಯ ಕಾರ್ಯದರ್ಶಿಗಳು / ಪ್ರಧಾನ ಕಾರ್ಯದರ್ಶಿಗಳು/ ಕಾರ್ಯದರ್ಶಿಗಳು.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ರವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.

4. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ, ರವರ ಆಪ್ತ ಸಹಾಯಕರು, 5ನೇ ಮಹಡಿ, ಬಹುಮಹಡಿ ಕಟ್ಟಡ, ಬೆಂಗಳೂರು.

5. ಸರ್ಕಾರದ ಉಪ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ ಹಾಗೂ ನೋಂ & ಮು.) ರವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.

6. ಶಾಖಾ ರಕ್ಷಾ ಕಡತ.